ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2013ನೇ ಸಾಲಿನ ಕರ್ನಾಟಕ ಕರ್ನಾಟಕ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

(ಅನುಬಂಧ–12)

6. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ)(ತಿದ್ದುಪಡಿ) ವಿಧೇಯಕ, 2013

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಕೆ.ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ, ಹಜ್ ಹಾಗೂ ವಕ್ಫ್ ಸಚಿವರು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಸ್.ಕೆ. ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ, ಹಜ್ ಹಾಗೂ ವಕ್ಫ್ ಸಚಿವರು): ಮಾನ್ಯ ಅಧ್ಯಕ್ಷರೆ, ಈ ಮೊದಲುAPMCಗೆ ಆಯ್ಕೆಯಾಗಿರತಕ್ಕಂಥ ಸದಸ್ಯರ ಬಗ್ಗೆ ಚುನಾವಣಾ ತಕರಾರು ಅರ್ಜಿ ತಂದರೆ ಅದನ್ನುMunsiffನ್ಯಾಯಾಲಯಕ್ಕೆ ಅರ್ಜಿ ಕೊಡುತ್ತಿದ್ದರು ಅಲ್ಲಿ ಚರ್ಚೆಯಾಗುತ್ತಿತ್ತು. ಆದರೆ, ಮಾನ್ಯ ಉಚ್ಚನ್ಯಾಯಾಲಯದಲ್ಲಿ

ದಾಖಲಾಗಿದ್ದwritಅರ್ಜಿ ಸಂಖ್ಯೆ 34952/2011 ರ ಪ್ರಕಾರ ಆ ಪ್ರಕರಣದಲ್ಲಿ ಒಂದು ಆದೇಶ ಇರತಕ್ಕಂಥದ್ದು. ಆ ಒಂದು ನ್ಯಾಯವನ್ನು ಕೃಷಿ ಮಾರುಕಟ್ಟೆ ನಿರ್ದೇಶಕರು ಅದನ್ನು ನಿರ್ಣಯ ಮಾಡಬೇಕೆಂದು ಅವರಿಗೆ ಅಧಿಕಾರ ಕೊಟ್ಟಿರತಕ್ಕಂಥದ್ದು. ಆ ಒಂದು ತಿದ್ದುಪಡಿ. ಅದರ ಜೊತೆಗೆ ಮೊನ್ನೆ Global Investors Meet ಆಯಿತು. ಅಲ್ಲಿ ಮೊದಲುನಾವು APMC ಯಿಂದ ಕೃಷಿ ಉತ್ಪನ್ನಗಳಿಗೆ ಸಂಬಂಧಪಟ್ಟಂಥ ಕೈಗಾರಿಕೆ ಸ್ಥಾಪನೆಯಾಗುವಂಥದ್ದಕ್ಕೆ ಅವರಿಗೆ ಮೊದಲು 5 ವರ್ಷ ಸುಂಕ ವಿನಾಯಿತಿ ಇತ್ತು. ಆ Global Investors Meet ನಲ್ಲಿ ಮತ್ತೆ ಇದು ಚರ್ಚೆಯಾಗಿ 5 ವರ್ಷ ಬೇಡ, 10 ವರ್ಷಕ್ಕೆ ಸುಂಕ ವಿನಾಯಿತಿ ಆಗಬೇಕೆಂದು ಚರ್ಚೆಯಾಗಿ ಇದರ ಬಗ್ಗೆ ತಿದ್ದುಪಡಿ ತಂದಿರತಕ್ಕಂಥದ್ದು. ಹೊಸ ಕೈಗಾರಿಕೆಗಳಿಗೆ 10 ವರ್ಷಗಳವರೆಗೆ ತೆರಿಗೆ ವಿನಾಯಿತಿ ಕೊಡುವಂಥದ್ದು ಮತ್ತುexportಮಾಡತಕ್ಕಂಥದ್ದಕ್ಕೆ ಕೂಡ ಸುಂಕ ವಿನಾಯಿತಿ ಮಾಡಬೇಕೆನ್ನುವ ತಿದ್ದುಪಡಿ ತಂದಿರುವಂಥದ್ದು.

ಶ್ರೀ ಟಿ.ಬಿ.ಜಯಚಂದ್ರ: ಇದು Investors Meetನಲ್ಲಿ ಆಗಿರತಕ್ಕಂಥ ತೀರ್ಮಾನ. ಈ ಬಿಲ್ ಬಂದ ಸಂದರ್ಭದಲ್ಲಿ ಕೇಂದ್ರ ಸರ್ಕಾರ FDIಅನ್ನು ಜಾರಿಗೊಳಿಸಿದೆ. ಪತ್ರಿಕೆಯಲ್ಲಿ ಕೂಡ ಸಾಕಷ್ಟು ರೀತಿಯಲ್ಲಿ ಅನೇಕಕಂಪನಿಗಳವರು ಕೂಡ ಬಂದು ಇಲ್ಲಿ invest ಮಾಡುವುದಕ್ಕೆ ತಯಾರಾಗುತ್ತಿದ್ದಾರೆ ಎನ್ನುವಂಥದ್ದು Economic Timesಪತ್ರಿಕೆಯಲ್ಲಿ ನಾನು ಓದಿದ್ದೇನೆ. ಆದರೆ, ಆ ರೀತಿ ಏನಾದರೂ ಕೂಡ ಏಕೆಂದರೆ, FDIನವರು ಏನಾದರೂ investment ಗೆ ಬಂದರೆ ಅವರು consequential ಆಗಿ APMC Actಗೆ amendmentಗೆ ಇನ್ನು ಮುಂದೆ ಬಂದೇ ಬರುತ್ತಾರೆ. ಆ ತರಹ ಏನಾದರೂ ನಿದರ್ಶನಗಳು ಬಂದಿವೆಯೇ? ಅವರಿಗೆ ಏನಾದರೂ accommodate ಮಾಡುತ್ತೀರಾ? ಅವರು ಬಂದಂಥ ಸಂದರ್ಭದಲ್ಲಿ ಇದು ಸಹಾಯ ಆಗುತ್ತದೆಯೇ? ದಯಮಾಡಿ ಸ್ವಲ್ಪ ಹೇಳಿ.

ಶ್ರೀ ಎಸ್.ಕೆ.ಬೆಳ್ಳುಬ್ಬಿ: ಆ ತರಹ ಏನೂ ಇಲ್ಲ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2013ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ)(ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

ಖಂಡ 2 ರಿಂದ 5

ಅಧ್ಯಕ್ಷರು: 2 ರಿಂದ 5ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ
2 ರಿಂದ 5ನೇ ಖಂಡಗಳು ವಿಧೇಯಕದ ಅಂಗವಾದವು.
ಪ್ರಸ್ತಾವ ಅಂಗೀಕರಿಸಲ್ಪಟ್ಟಿತು
(2 ರಿಂದ 5ನೇ ಖಂಡಗಳನ್ನು ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.
ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಕೆ.ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ, ಹಜ್ ಹಾಗೂ ವಕ್ಫ್ ಸಚಿವರು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಏನೆಂದರೆ,

2013ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ)(ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

(ಅನುಬಂಧ–13)